## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2012–13ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ/ಪ್ರೌಢಶಾಲಾ ಮುಖ್ಯ ಶಿಕ್ಷಕರ ವರ್ಗಾವಣೆಯನ್ನು 2012ರ ಜೂನ್ 5 ರವರೆಗೆ ವಿಸ್ತರಿಸುವ ಬಗ್ಗೆ.

**ಓದಲಾಗಿದೆ:** (1) ಸರ್ಕಾರದ ಆದೇಶ ಸಂಖ್ಯೆ: ಇಡಿ 173 ಇಟಿಆರ್ 2007, ದಿ: 12.05.2009

(2) ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ದಿ. 29.5.2012ರ ಪತ್ರ ಸಂಖ್ಯೆ ಸಿ4(7) ವರ್ಗಾವಣೆ 01/2011–12

* * * * *

<u>ಪ್ರಸ್ತಾವನೆ</u> :–

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2009–10ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ/ವಿಶೇಷ ಶಿಕ್ಷಕರ/ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ವರ್ಗಾವಣೆಯನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ಹಾಗೂ ಅದರಡಿ ರಚಿಸಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007 ರಡಿಯಲ್ಲಿ ನಿರ್ದಿಷ್ಟಪಡಿಸಿರುವ ಸೂಚನೆ ಹಾಗೂ ಷರತ್ತುಗಳನ್ನು ಪಾಲಿಸುವುದಕ್ಕೊಳಪಟ್ಟು ವರ್ಗಾವಣೆ ಪ್ರಕ್ರಿಯೆಯನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಆದಷ್ಟು ಕಡಿಮೆ ಅವಧಿಯಲ್ಲಿ ಅಂದರೆ ಮೇ ತಿಂಗಳೊಳಗೆ ಪೂರ್ಣಗೊಳಿಸಲು ತಿಳಿಸಲಾಗಿತ್ತು.

2. ಮೇಲೆ (2) ರಲ್ಲಿ ಓದಲಾದ ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರದಲ್ಲಿ ಶಿಕ್ಷಕರ ವರ್ಗಾವಣೆ ಅಧಿನಿಯಮದ ಅನ್ವಯ ಸಾಮಾನ್ಯ ವರ್ಗಾವಣೆಗಳನ್ನು ಪ್ರತಿ ವರ್ಷದ ಏಪ್ರಿಲ್/ಮೇ ತಿಂಗಳಲ್ಲಿ ಮಾಡಲು ಅವಕಾಶವಿದ್ದು, ದಿ. 17.5.2012ರಂದು ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣಾ ಕೌನ್ಸಿಲಿಂಗ್‌ನ್ನು ಆರಂಭಿಸಲಾಗಿದ್ದು, ಒಟ್ಟು 5900 ಶಿಕ್ಷಕರ ಕೌನ್ಸಿಲಿಂಗ್ ಆಗಿರುತ್ತದೆ. ದಿ. 26.5.2012ರಿಂದ ಪ್ರೌಢಶಾಲಾ ಶಿಕ್ಷಕರ ವರ್ಗಾವಣಾ ಕೌನ್ಸಿಲಿಂಗ್‌ನ್ನು ಆರಂಭಿಸಲಾಗಿದ್ದು, ಒಟ್ಟು 1050 ಶಿಕ್ಷಕರ ಕೌನ್ಸಿಲಿಂಗ್ ಆಗಿರುತ್ತದೆ. ಇನ್ನು ಸುಮಾರು 3500 ಪ್ರಾಥಮಿಕ ಶಾಲಾ ಹಾಗೂ 1950 ಪ್ರೌಢಶಾಲಾ ಶಿಕ್ಷಕರ ವರ್ಗಾವಣಾ ಕೌನ್ಸಿಲಿಂಗ್ ನಡೆಯಬೇಕಾಗಿರುತ್ತದೆ. ಅಲ್ಲದೆ ವಿಶೇಷ ಶಿಕ್ಷಕರು ಮತ್ತು ಮುಖ್ಯಶಿಕ್ಷಕರ ವರ್ಗಾವಣೆ ಕೌನ್ಸಿಲಿಂಗ್ ಸಹ ಬಾಕಿಯಿರುವುದರಿಂದ, ಮೇ ಅಂತ್ಯದೊಳಗೆ ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಳಿಸಲು ಸಾಧ್ಯವಾಗುವುದಿಲ್ಲವಾದ್ದರಿಂದ, 2012ನೇ ಸಾಲಿನ ಶಿಕ್ಷಕರ ವರ್ಗಾವಣೆಗಳನ್ನು

ದಿನಾಂಕ: 5.06.2012 ರೊಳಗೆ ಮಾಡಲು ಅವಧಿ ವಿಸ್ತರಿಸಿ ಅನುಮತಿಯನ್ನು ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ. ಅದರಂತೆ ಈ ಕೆಳಕಂಡ ಆದೇಶ ಹೊರಡಿಸಲು ಉದ್ದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 22 ಇಟಿಆರ್ 2012**

**ಬೆಂಗಳೂರು, ದಿನಾಂಕ: 01.06.2012**

3. ಪ್ರಸ್ತಾವನೆಯಲ್ಲಿ ವಿವರಿಸಲಾದ ಸನ್ನಿವೇಶದಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007 ರ ನಿಯಮ 8(1) ರಲ್ಲಿ ಸಾಮಾನ್ಯ ವರ್ಗಾವಣೆಯನ್ನು ಪ್ರತಿವರ್ಷದ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಮಾತ್ರ ಮಾಡತಕ್ಕದ್ದು ಎಂಬುದಕ್ಕೆ 2012–13 ನೇ ಸಾಲಿನಲ್ಲಿ, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ/ವಿಶೇಷ ಶಿಕ್ಷಕರ/ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಾಮಾನ್ಯ ವರ್ಗಾವಣೆಯನ್ನು ಗಣಕೀಕೃತ ಕೌನ್ಸಿಲಿಂಗ್ ಮುಖೇನ 2012ರ ಜೂನ್ 5 ರೊಳಗೆ ವರ್ಗಾವಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

(ಎಂ. ಪ್ರಭುಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

ಇವರಿಗೆ:

(1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
(2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗಾ
(3) ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
(4) ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
(5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ರವರ ಆಪ್ತ ಕಾರ್ಯದರ್ಶಿಯವರಿಗೆ
(6) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು
(7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.